ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: ಸಚಿವರು

ಪತ್ರಿಕೆಯ ಹೆಸರು : NAME OF THE NEWS PAPER: ಉದಯವಾಣಿ ದಿನಾಂಕ : DATE : 4/10/2020

# ಸಚಿವ ಸ್ಥಾನಕ್ಕೆ ಸಿ.ಟಿ. ರವಿ ರಾಜೀನಾಮೆ

ಬೆಂಗಳೂರು: ಬಿಜೆಪಿ ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿ ಸ್ಥಾನಕ್ಕೆ ನೇಮಕಗೊಂಡಿರುವ ಬೆನ್ನಲ್ಲೇ ಸಿ.ಟಿ. ರವಿ ಅವರು ಸಚಿವ ಸ್ಥಾನಕ್ಕೆ ರಾಜೀನಾಮೆ ನೀಡಿದ್ದಾರೆ. ಆದರೆ, ಈ ರಾಜೀನಾಮೆಯನ್ನು ಸಿಎಂ ಬಿ.ಎಸ್.ಯಡಿಯೂರಪ್ಪ ಅಂಗೀಕರಿಸುತ್ತಾರೆಯೇ ಇಲ್ಲವೇ ಎಂಬ ಕುತೂಹಲ ಮೂಡಿದೆ. ಮುಖ್ಯಮಂತ್ರಿಗಳ ಅಧಿಕೃತ ನಿವಾಸ 'ಕಾವೇರಿ'ಯಲ್ಲಿ ಶನಿವಾರ ಯಡಿಯೂರಪ್ಪ ಅವರನ್ನು ಭೇಟಿಯಾಗಿದ್ದ ಸಿ.ಟಿ. ರವಿ ಅವರು, 'ಒಬ್ಬ ವ್ಯಕ್ತಿ ಒಂದು ಹುದ್ದೆ' ಎಂಬ ಪಕ್ಷದ ಅಲಿಖಿತ ನಿಯಮದಂತೆ ಸಚಿವ ಸ್ಥಾನಕ್ಕೆ ರಾಜೀನಾಮೆ ಸಲ್ಲಿಸಿದರು. ಆದರೆ ಸಿಎಂ ರಾಜೀನಾಮೆಯನ್ನು ಅಂಗೀಕರಿಸಿದಂತಿಲ್ಲ.